# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 214

ಸದಸ್ಯರ ಹೆಸರು : ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 14.02.2023

ಉತ್ತರಿಸುವ ಸಚಿವರು : ಸಹಕಾರ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಸಹಕಾರ ಇಲಾಖೆಯಲ್ಲಿ ಮಂಜೂರಾದ ಒಟ್ಟು ಹುದ್ದೆಗಳೆಷ್ಟು; (ವಿವರ ನೀಡುವುದು) | ಸಹಕಾರ ಇಲಾಖೆಯ ವ್ಯಾಪ್ತಿಯಲ್ಲಿ ಬರುವ 4 ಅಧೀನ ಇಲಾಖೆಗಳಲ್ಲಿ ಮಂಜೂರಾದ ಹುದ್ದೆಗಳ ವಿವರಗಳು ಈ ಕೆಳಕಂಡಂತಿದೆ. |

| ಕ್ರ.ಸಂ. | ಇಲಾಖೆ | ಮಂಜೂರಾದ ಹುದ್ದೆಗಳ ಸಂಖ್ಯೆ | | | |
|---|---|---|---|---|---|
| | | ಎ | ಬಿ | ಸಿ | ಡಿ |
| 1 | ಸಹಕಾರ ಸಂಘಗಳ ನಿಬಂಧಕರ ಕಛೇರಿ | **143** | 441 | 1604 | 468 |
| 2 | ಕೃಷಿ ಮಾರಾಟ ಇಲಾಖೆ | **75** | 275 | 2463 | 658 |
| 3 | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ | **43** | 121 | 1059 | 195 |
| 4 | ಕರ್ನಾಟಕ ರಾಜ್ಯ ಉಗ್ರಾಣ ನಿಗಮ | **33** | 88 | 567 | 252 |
| | ಒಟ್ಟು | **294** | **925** | **5693** | **1573** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಆ | ಇವುಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; | ಖಾಲಿ ಹುದ್ದೆಗಳ ವಿವರಗಳು ಕೆಳಕಂಡಂತಿದೆ. |

| ಕ್ರ.ಸಂ. | ಇಲಾಖೆ | ಖಾಲಿ ಹುದ್ದೆಗಳು ಸಂಖ್ಯೆ | | | |
|---|---|---|---|---|---|
| | | ಎ | ಬಿ | ಸಿ | ಡಿ |
| 1 | ಸಹಕಾರ ಸಂಘಗಳ ನಿಬಂಧಕರ ಕಛೇರಿ | **61** | 91 | 1058 | 351 |
| 2 | ಕೃಷಿ ಮಾರಾಟ ಇಲಾಖೆ | **20** | 140 | 1771 | 534 |
| 3 | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ | **20** | 48 | 771 | 142 |
| 4 | ಕರ್ನಾಟಕ ರಾಜ್ಯ ಉಗ್ರಾಣ ನಿಗಮ | **19** | 66 | 380 | – |
| | ಒಟ್ಟು | **120** | **345** | **3980** | **1027** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಇ | ಸದರಿ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? | ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮತ್ತು ಪದೋನ್ನತಿ ಮೂಲಕ ಭರ್ತಿ ಮಾಡಲಾಗುತ್ತದೆ. ಇದರಲ್ಲಿ ಪದೋನ್ನತಿ ಮೂಲಕ ಭರ್ತಿ ಮಾಡಬೇಕಾದ ಹುದ್ದೆಗಳಿಗೆ ಅರ್ಹತಾದಾಯಕ ಸೇವೆಯನ್ನು ಪೂರೈಸಿದ ಅರ್ಹ ಅಧಿಕಾರಿ/ನೌಕರರಿಗೆ ನಿಯಮಾನುಸಾರ ಮುಂಬಡ್ತಿ ನೀಡುವ ಮೂಲಕ ಕಾಲಕಾಲಕ್ಕೆ ಭರ್ತಿ ಮಾಡಲಾಗುತ್ತದೆ. |

ನೇರ ನೇಮಕಾತಿಗೆ ಸಂಬಂಧಿಸಿದಂತೆ ಖಾಲಿ ಇರುವ ಹುದ್ದೆಗಳನ್ನು ಆರ್ಥಿಕ ಇಲಾಖೆಯು ಅನುಮೋದನೆ ನೀಡಿದ ಸಂಖ್ಯೆಗಳಿಗನುಗುಣವಾಗಿ ನಿಯಮಾನುಸಾರ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತದೆ.. ಪ್ರಸ್ತುತ ಭರ್ತಿ ಮಾಡುವ ಬಗ್ಗೆ ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗಿದೆ.

**<u>ಸಹಕಾರ ಸಂಘಗಳ ನಿಬಂಧಕರ ಕಛೇರಿ:-</u>** 'ಸಿ' ವರ್ಗದ 3 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಮತ್ತು 400 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ಸದರಿ ಇಲಾಖೆಯು 100 ಹುದ್ದೆಗಳಿಗೆ ಅನುಮತಿ ನೀಡಿರುತ್ತದೆ. ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ.

**<u>ಕೃಷಿ ಮಾರಾಟ ಇಲಾಖೆ:-</u>** ಖಾಲಿ ಇರುವ ಒಟ್ಟು ಹುದ್ದೆಗಳಲ್ಲಿ 61 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಹಾಗೂ ಒಟ್ಟು 707 ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

**<u>ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ:-</u>**

1. 'ಸಿ' ವರ್ಗದ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅನುಮತಿ ಕೋರಲಾಗಿದ್ದು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯನ್ನು ರಾಜ್ಯ ಲೆಕ್ಕಪತ್ರ ಇಲಾಖೆಯಲ್ಲಿ ವಿಲೀನಗೊಳಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುವುದರಿಂದ ಸಹಮತಿ ದೊರೆತಿರುವುದಿಲ್ಲ ಹಾಗೂ 9 ಹುದ್ದೆಗಳಿಗೆ ದಿ:09.02.2023 ರಂದು ಕರ್ನಾಟಕ ಲೋಕಸೇವಾ ಆಯೋಗವು ಆಯ್ಕೆ ಪಟ್ಟಿ ಪ್ರಕಟಿಸಿದ್ದು, ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದೆ.
2. 'ಸಿ' ವರ್ಗದ 20 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗವು ಅರ್ಜಿ ಆಹ್ವಾನಿಸಿದ್ದು, ಆಯ್ಕೆ ಪ್ರಕ್ರಿಯೆ ಬಾಕಿ ಇರುತ್ತದೆ.
3. 'ಬಿ' ವರ್ಗದ 4 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.
4. 'ಡಿ' ವರ್ಗದ ಹುದ್ದೆಗಳನ್ನು ಅವಶ್ಯಕತೆಗೆ ಅನುಗುಣವಾಗಿ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುತ್ತಿದೆ.

**<u>ಕರ್ನಾಟಕ ರಾಜ್ಯ ಉಗ್ರಾಣ ನಿಗಮ:-</u>**

1. ವಿವಿಧ ವೃಂದದ 86 ಹುದ್ದೆಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸುವಂತೆ ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ಇವರನ್ನು ಕೋರಲಾಗಿದೆ.
2. ವಿವಿಧ ವೃಂದದ ಒಟ್ಟು 28 ಹುದ್ದೆಗಳಿಗೆ ಸೇವೆಯನ್ನು ಬಾಹ್ಯ ಮೂಲದಿಂದ ಪಡೆಯಲಾಗಿದೆ.

**ಸಂಖ್ಯೆ: ಸಇ 43 ರರವಿ 2023**

(ಎಸ್.ಟಿ.ಸೋಮಶೇಖರ್)

**ಸಹಕಾರ ಸಚಿವರು**